**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು**

ಸಂಖ್ಯೆ: ಪಪೂಶಿಇ/ಪರೀಕ್ಷೆ/ಮೂ.ಪ.ಅ/93/2020-21. ದಿನಾಂಕ:14.07.2020

# ಸುತ್ತೋಲೆ

ವಿಷಯ: ಮಾರ್ಚ್ 2020 ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಹಾಗೂ 2020ರ ಪೂರಕ ಪರೀಕ್ಷೆಗೆ ಅರ್ಜಿ ಸಲ್ಲಿಸುವ ಬಗ್ಗೆ.

* * * * *

ಮಾರ್ಚ್ 2020ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶವನ್ನು ದಿನಾಂಕ: 14.07.2020ರ ಮದ್ಯಾಹ್ನ 12-00 ಗಂಟೆಗೆ ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ. ಕೋವಿಡ್-19 ಹಿನ್ನೆಲೆಯಲ್ಲಿ ಫಲಿತಾಂಶವನ್ನು ಕಾಲೇಜುಗಳ ಸೂಚನಾ ಫಲಕಗಳಲ್ಲಿ ಪ್ರಕಟಿಸುವಂತಿಲ್ಲ. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳು ಫಲಿತಾಂಶವನ್ನು ಇಲಾಖೆಯಿಂದ ಸ್ವೀಕರಿಸಿದ ನಂತರ ವಿದ್ಯಾರ್ಥಿಗಳಿಗೆ ಇ-ಮೇಲ್/ಎಸ್.ಎಂ.ಎಸ್/ವಾಟ್ಸಾಪ್/ವೆಬ್‌ಸೈಟ್ ಮೂಲಕ ನೀಡಲು ಕ್ರಮವಹಿಸಲು ಸೂಚಿಸಿದೆ.

**ಪ್ರಕಟಿಸಲಾದ ಫಲಿತಾಂಶದಲ್ಲಿ ನ್ಯೂನ್ಯತೆ ಹಾಗೂ 2020ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗಳ ಬಗ್ಗೆ ಪ್ರಾಂಶುಪಾಲರಿಗೆ ವಿಶೇಷ ಸೂಚನೆಗಳು:**

1. ದ್ವಿತೀಯ ಪಿಯುಸಿ ಪರೀಕ್ಷೆಗಳ ಫಲಿತಾಂಶವನ್ನು ಸರ್ಕಾರದ ಆದೇಶ ಸಂಖ್ಯೆ:ಇಡಿ 465 ಡಿಜಿಡಬ್ಲ್ಯೂ 2016 (2) ದಿನಾಂಕ 25.03.2017 ಆದೇಶದ ಅನ್ವಯ **'ಕರ್ನಾಟಕ ಪ್ರೀ ಯೂನಿವರ್ಸಿಟಿ ಕೋರ್ಸ್ ಸ್ಟೇಟ್ ಲೆವೆಲ್ ಪರೀಕ್ಷೆ (ತಿದ್ದುಪಡಿ) ನಿಯಮಾವಳಿ 2017** ರಂತೆ ದಿನಾಂಕ:14.07.2020 ರಂದು ಘೋಷಿಸಲಾಗಿದೆ.

2. ಪ್ರತಿ ಕಾಲೇಜಿಗೆ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶ ಪಟ್ಟಿಯನ್ನು ಇ-ಮೇಲ್ ಮೂಲಕ ಕಳುಹಿಸಲಾಗಿದೆ.

3. ಮಾರ್ಚ್ 2020ರಲ್ಲಿ ನಡೆಸಿದ ದ್ವಿತೀಯ ಪಿಯುಸಿ ಪರೀಕ್ಷೆಗೆ ಹಾಜರಾಗಿರುವ ವಿದ್ಯಾರ್ಥಿಗಳ ಪ್ರಕಟಿತ ಫಲಿತಾಂಶದಲ್ಲಿ ಏನಾದರೂ ನ್ಯೂನತೆ ಇದ್ದಲ್ಲಿ ದಿನಾಂಕ:28.07.2020ರೊಳಗಾಗಿ ಫಲಿತಾಂಶವನ್ನು ಸರಿಪಡಿಸಿಕೊಳ್ಳಲು ಸೂಚಿಸಿದೆ. ಫಲಿತಾಂಶದ ನ್ಯೂನತೆ ಸರಿಪಡಿಸಲು ಸಂಬಂಧಿಸಿದ ಪರೀಕ್ಷಾ ಕೇಂದ್ರದ ಕೊಠಡಿ ಮೇಲ್ವಿಚಾರಕರ ದಿನಚರಿ, Marked Nominal Roll ಮತ್ತು ಇತರೆ ಪೂರಕ ದಾಖಲೆಗಳ ಸಹಿತ ಕೇಂದ್ರ ಕಛೇರಿಗೆ ಪ್ರಾಂಶುಪಾಲರೆ ಖುದ್ದಾಗಿ ಹಾಜರಾಗಿ ಫಲಿತಾಂಶವನ್ನು ಸರಿಪಡಿಸಿಕೊಳ್ಳಲು ಸೂಚಿಸಿದೆ. ದಿನಾಂಕ:28.07.2020ರ ನಂತರ ಬಂದಂತಹ ಯಾವುದೇ ರೀತಿಯ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ. ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳನ್ನು/ಪೋಷಕರನ್ನು ಫಲಿತಾಂಶಕ್ಕೆ ಸಂಬಂಧಿಸಿದಂತೆ ಕೇಂದ್ರ ಕಛೇರಿಗೆ ಕಳುಹಿಸಬಾರದು. ಕಳುಹಿಸಿದಲ್ಲಿ ಮುಂದೆ ಸಂಭವಿಸಬಹುದಾದ ಆಗು-ಹೋಗುಗಳಿಗೆ ಪ್ರಾಂಶುಪಾಲರನ್ನೇ ನೇರ ಹೊಣೆಗಾರರನ್ನಾಗಿಸಲಾಗುವುದು.

4. ಮಾರ್ಚ್ 2020ರಲ್ಲಿ ನಡೆಸಿದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಂದ 2020ರ ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆಗೆ ಶುಲ್ಕ ಕಟ್ಟಿಸಿಕೊಳ್ಳಲು ಅನುತ್ತೀರ್ಣ MCA ಅರ್ಜಿಗಳಿಗಾಗಿ ಕಾಯಬೇಕಾದ ಅವಶ್ಯಕತೆ ಇಲ್ಲ. ಫಲಿತಾಂಶ ಪಟ್ಟಿ ಆಧಾರದ ಮೇರೆಗೆ ಅನುತ್ತೀರ್ಣ ವಿಷಯಗಳಿಗೆ ನಿಯಮಾನುಸಾರ ಪರೀಕ್ಷಾ ಶುಲ್ಕ ಕಟ್ಟಿಸಿಕೊಳ್ಳುವುದು. ಅನುತ್ತೀರ್ಣ MCA ಅರ್ಜಿಗಳು ಕಾಲೇಜಿಗೆ ತಲುಪಿದ ಕೂಡಲೇ ಶುಲ್ಕಕಟ್ಟಿದ ಅಭ್ಯರ್ಥಿಗಳ MCA ಅರ್ಜಿಗಳನ್ನು ಭರ್ತಿಮಾಡಿ ಇಲಾಖೆಯ Online Portal ನಲ್ಲಿ ತುಂಬಿದ ನಂತರ ಉಪನಿರ್ದೇಶಕರ ಕಛೇರಿಗೆ ಒಂದೇ ಕಂತಿನಲ್ಲಿ ಸಲ್ಲಿಸುವುದು.

M. K...

5. ಜುಲೈ 2019ರ ದ್ವಿತೀಯ ಪಿಯುಸಿ ಪರೀಕ್ಷೆ ಹಾಗೂ ಅದಕ್ಕೂ ಹಿಂದಿನ ಪರೀಕ್ಷೆಗಳಲ್ಲಿ ಅಥವಾ ಹಿಂದಿನ ಎಂ.ಸಿ.ಎ. (Marks Card Cum Application)ಗಳ ಆಧಾರದ ಮೇಲೆ ಪರೀಕ್ಷಾ ಶುಲ್ಕಗಳನ್ನು ಕಟ್ಟಿಸಿಕೊಂಡು ಇಲಾಖಾ Online Portal ನಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ತುಂಬುವುದು.

6. ಮಾರ್ಚ್ 2020ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳು ನಿಯಮಾನುಸಾರ ಫಲಿತಾಂಶ ತಿರಸ್ಕರಿಸಿ ಪರೀಕ್ಷೆ ಬರೆಯಲು ಇಚ್ಛಿಸಿದಲ್ಲಿ, ಮೂಲ ಅನುತ್ತೀರ್ಣ ಓಎಂಆರ್‌ಗಳನ್ನು ಪಡೆದುಕೊಂಡ ನಂತರವೇ ಕ್ರಮವಹಿಸುವುದು. ಶುಲ್ಕಗಳ ಬಗ್ಗೆ ಫಲಿತಾಂಶ ತಿರಸ್ಕರಣೆ ಅರ್ಜಿಯ ಹಿಂಬದಿಯಲ್ಲಿನ ಸೂಚನೆಗಳನ್ನು ಗಮನಿಸುವುದು. ವಿದ್ಯಾರ್ಥಿಗಳು ಪರೀಕ್ಷೆ ಫಲಿತಾಂಶವನ್ನು ತಿರಸ್ಕರಿಸಲು ಇಚ್ಛಿಸಿದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರು ತಮ್ಮ ಹಂತದಲ್ಲಿಯೇ ಪರೀಕ್ಷೆ ಫಲಿತಾಂಶವನ್ನು ತಿರಸ್ಕರಿಸಿ, ಪರೀಕ್ಷಾ ಶುಲ್ಕ ಮತ್ತು ಫಲಿತಾಂಶದ ತಿರಸ್ಕರಣೆಯ ಶುಲ್ಕವನ್ನು ಕಟ್ಟಿಸಿಕೊಂಡು ನಿಯಮಾನುಸಾರ ಫಲಿತಾಂಶ ತಿರಸ್ಕರಣೆಗೆ ಅವಕಾಶ ನೀಡುವುದು ಹಾಗೂ ಕಡ್ಡಾಯವಾಗಿ Online Portal ನಲ್ಲಿ ಮಾಹಿತಿಗಳನ್ನು ದಾಖಲಿಸುವುದು.

7. ಮಾರ್ಚ್ 2019, ಜುಲೈ-2019 ಹಾಗೂ ಮಾರ್ಚ್ 2020ರ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದು ಫಲಿತಾಂಶ ತಿರಸ್ಕರಿಸಿ 2020ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆ ಬರೆಯಲು ಇಚ್ಛಿಸಿದ್ದಲ್ಲಿ, ಅಂತಹ ವಿದ್ಯಾರ್ಥಿಗಳು **ಮೂಲ ಅಂಕಪಟ್ಟಿಗಳ** (Original Marks Card) ಆಧಾರದ ಮೇಲೆ ನಿಯಮಾನುಸಾರ ಫಲಿತಾಂಶ ತಿರಸ್ಕರಣೆಗೆ ಅವಕಾಶ ನೀಡುವುದು ಹಾಗೂ Online Portal ನಲ್ಲಿ ಮಾಹಿತಿಗಳನ್ನು ದಾಖಲಿಸುವುದು.

8. ಸರ್ಕಾರದ ಆದೇಶ ಸಂಖ್ಯೆ ಇಡಿ 195 ಡಿಜಿಡಿ 2017 ಬೆಂಗಳೂರು ದಿನಾಂಕ:20.03.2018ರಂತೆ ಶುಲ್ಕ ಹಾಗೂ ಫಲಿತಾಂಶ ತಿರಸ್ಕರಣಾ ಶುಲ್ಕ ಹಾಗೂ ದಂಡ ಶುಲ್ಕಗಳನ್ನು ಪರಿಷ್ಕರಿಸಿದೆ.

**2020ರ ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆಗೆ ಅನುತ್ತೀರ್ಣ ವಿದ್ಯಾರ್ಥಿಗಳು ಪಾವತಿಸಬೇಕಾದ ಶುಲ್ಕ ಮತ್ತು ಫಲಿತಾಂಶ ತಿರಸ್ಕರಣಾ ಶುಲ್ಕಗಳ ವಿವರ:**

| **ಪರೀಕ್ಷಾ ಶುಲ್ಕ (ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ-1ರ ವಿದ್ಯಾರ್ಥಿಗಳನ್ನು ಹೊರತು ಪಡಿಸಿ)** | |
|---|---|
| ಒಂದು ವಿಷಯಕ್ಕೆ | ರೂ. 140/- |
| ಎರಡು ವಿಷಯಕ್ಕೆ | ರೂ. 270/- |
| ಮೂರು ಅಥವಾ ಹೆಚ್ಚಿನ ವಿಷಯಗಳು | ರೂ. 400/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ-1ರ ವಿದ್ಯಾರ್ಥಿಗಳು ಸೇರಿದಂತೆ ಎಲ್ಲಾ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಂದ ಕಡ್ಡಾಯವಾಗಿ ಸಲ್ಲಿಸಬೇಕಾದ ಅಂಕಪಟ್ಟಿ ಶುಲ್ಕ | ರೂ. 50/- |

| **ಫಲಿತಾಂಶ ತಿರಸ್ಕರಣಾ ಶುಲ್ಕ** | |
|---|---|
| ಪ್ರಥಮ ಬಾರಿಗೆ ಒಂದು ವಿಷಯಕ್ಕೆ | ರೂ. 175/- |
| ದ್ವಿತೀಯ ಹಾಗೂ ಅಂತಿಮ ಬಾರಿಗೆ ಒಂದು ವಿಷಯಕ್ಕೆ | ರೂ. 350/- |

**2020ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಅನುತ್ತೀರ್ಣ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕಗಳು:**

| ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ (ಅನುತ್ತೀರ್ಣ ಮತ್ತು ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳ ಮಾಹಿತಿಯನ್ನು) Online Portal ನಲ್ಲಿ Update ಮಾಡಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಮೂಲ ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|
| 31.07.2020 | 03.08.2020 | 05.08.2020 |

ಉಪನಿರ್ದೇಶಕರು ಪ್ರಾಂಶುಪಾಲರಿಂದ ಸ್ವೀಕರಿಸಿದ ಪರೀಕ್ಷಾ ಅರ್ಜಿಗಳನ್ನು Online Portal ನಲ್ಲಿ Update ಮಾಡಿರುವುದನ್ನು ಖಾತ್ರಿಪಡಿಸಿಕೊಂಡು ಪ್ರಾಂಶುಪಾಲರಿಂದ ಅಪ್‌ಡೇಟ್ ಮಾಡಿರುವುದಕ್ಕೆ ಸಂಬಂಧಿಸಿದಂತೆ ಮುಚ್ಚಳಿಕೆ ಪತ್ರ ಪಡೆದ ನಂತರ, ಕಾಲೇಜುವಾರು ಕ್ರೋಡಿಕೃತ ವಿದ್ಯಾರ್ಥಿಗಳ ಪಟ್ಟಿ, ಹಣ ಪಾವತಿಸಿರುವ ಮೂಲ ಚಲನ್ ಹಾಗೂ ಮುಚ್ಚಳಿಕೆ ಪತ್ರವನ್ನು ಖುದ್ದಾಗಿ ದಿನಾಂಕ:06.08.2020ರೊಳಗಾಗಿ ಕೇಂದ್ರ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

2020ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಯ ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ

**ಕ್ರಮಕ್ಕಾಗಿ:**

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ.
2. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ.
   (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ಮಾಹಿತಿ ಮತ್ತು ನಿರ್ದೇಶನ ನೀಡಲು) ಮಾಹಿತಿಗಾಗಿ.

**ಪ್ರತಿಗಳು:**

3. ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ ಮಾಹಿತಿಗಾಗಿ.
4. ಗಣಕ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ ರವರಿಗೆ ಮಾಹಿತಿಗಾಗಿ.
5. ಇ-ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ ರವರಿಗೆ, (ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು).
6. ಹೆಚ್ಚುವರಿ / ಕಛೇರಿ ಪ್ರತಿ.